## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಸರ್ಕಾರಿ ನೌಕರರಾದ (1) ಶ್ರೀ ಆನಂದಕುಮಾರ್, (ನಿವೃತ್ತ) ಕಾರ್ಯದರ್ಶಿ, ಚಿನ್ನೇನಹಳ್ಳಿ ಗ್ರಾಮ ಪಂಚಾಯತಿ, ಶಿರಾ ತಾಲ್ಲೂಕು, ತುಮಕೂರು ಜಿಲ್ಲೆ ಇವರ ಕರ್ತವ್ಯ ಲೋಪ/ದುರ್ವತನೆ ಎಸಗಿರುವ ಬಗ್ಗೆ- ಆದೇಶ.

**ಓದಲಾಗಿದೆ:**
1. ಮಾನ್ಯ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪ.ಸಂ:ಕಂಪ್ಲೇಂಟ್/ಉಪಲೋಕ್/ಬಿಡಿ-7623/2015/ಎಆರ್‌ಎಲ್‌ಓ-2, ದಿನಾಂಕ: 26-04-2017.
2. ಮಾನ್ಯ ಉಪಲೋಕಾಯಕ್ತರವರ ವರದಿ ಸಂಖ್ಯೆ:ಕಂಪ್ಲೇಂಟ್/ಉಪಲೋಕ್/ ಬಿಡಿ-7623/2015/ಸನಿಕಾಸ-2, ದಿನಾಂಕ: 21-04-2017.

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ದಿನಾಂಕ: 26-04-2017 ರವರ ಪತ್ರದೊಂದಿಗೆ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ಕಲಂ 9 ರನ್ವಯ ಮಾನ್ಯ ಉಪಲೋಕಾಯುಕ್ತರವರ ಸಲ್ಲಿಸಿರುವ ವರದಿಯಲ್ಲಿ ಶ್ರೀ ಬಿ.ಎನ್.ಲಕ್ಷ್ಮೀಪ್ರಸನ್ನ, ರಾಘವೇಂದ್ರ ನಗರ, ತುಮಕೂರು (ಇನ್ನು ಮುಂದೆ "ದೂರುದಾರರು" ಎಂದು ಕರೆಯಲ್ಪಡುತ್ತಾರೆ) ತಮ್ಮ ದೂರಿನಲ್ಲಿ (1) ಶ್ರೀ ಆನಂದಕುಮಾರ್, (ನಿವೃತ್ತ) ಕಾರ್ಯದರ್ಶಿ, ಚಿನ್ನೇನಹಳ್ಳಿ ಗ್ರಾಮ ಪಂಚಾಯತಿ, ಶಿರಾ ತಾಲ್ಲೂಕು, ತುಮಕೂರು ಜಿಲ್ಲೆ (ಇನ್ನು ಮುಂದೆ "ಎದುರುದಾರರು" ಎಂದು ಕರೆಯಲ್ಪಡುತ್ತಾರೆ) ರವರ ವಿರುದ್ಧ ನೀಡಿದ ದೂರನ್ನು, ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 9 ಅಡಿಯಲ್ಲಿ ತನಿಖೆ ತೆಗೆದುಕೊಳ್ಳಲಾಗಿದೆ.

**ದೂರಿನ ಸಂಕ್ಷಿಪ್ತ ವಿವರಣೆ:**

ದೂರುದಾರರು ತಮ್ಮ ದೂರಿನಲ್ಲಿ ಶಿರಾ ತಾಲ್ಲೂಕು ಬ್ರಹ್ಮಸಂದ್ರ ಗ್ರಾಮದಲ್ಲಿ 300 ವರ್ಷಗಳ ಹಳೆಯದಾದ ಶ್ರೀ ತಾರಕಾನಂದ ಆಶ್ರಮವಿದ್ದು, ಅಲ್ಲಿ ಖಾತೆ ನಂ.99/138 ಅಂತ ಖಾಲಿ ನಿವೇಶನವಿದ್ದು 2012-13ನೇ ಸಾಲಿನವರೆಗೆ ಆಶ್ರಮಕ್ಕೆ ಸೇರಿದ್ದಾಗಿತ್ತು. ಆದರೆ 2014-15ನೇ ಸಾಲಿನಲ್ಲಿ ಬಿ.ವಿ.ಸೂರ್ಯನಾರಾಯಣಾವ್, ಬಿ.ವಿ.ನಾಗೇಂದ್ರ ಮೂರ್ತಿ ಮತ್ತು ಬಿ.ವಿ.ನರಸಿಂಹಮೂರ್ತಿ ಎನ್ನುವವರ ಹೆಸರಿನಲ್ಲಿ ಜಂಟಿ ಖಾತೆ ಆಗಿರುತ್ತದೆ. ಈ ಖಾತೆ ಹೇಗೆ ಆಯಿತು ಎಂದು ಎದುರುದಾರರಿಗೆ ಮಾಹಿತಿ ಹಕ್ಕಿನಲ್ಲಿ ಕೇಳಿದಾಗ ಪಂಚಾಯತಿಯ ದಾಖಲೆಗಳೆಲ್ಲ ಸುಟ್ಟು ಹೋಗಿವೆಯೆಂದು ಮಾಹಿತಿ ನೀಡಿದ್ದು, ಆದ್ದರಿಂದ ಎದುರುದಾರರು ಅಕ್ರಮವಾಗಿ ಮೇಲ್ಕಂಡ ಜನರ ಹೆಸರಿನಲ್ಲಿ ಖಾತೆ ಮಾಡಿದ್ದಾರೆಂಬ ಅನುಮಾನವಿರುತ್ತದೆ. ಇದನ್ನು ಪರಿಶೀಲಿಸಿ ಎದುರುದಾರರ ವಿರುದ್ಧ ಕ್ರಮಕೈಗೊಳ್ಳಬೇಕೆಂದು ಕೋರಿ ದೂರು ಸಲ್ಲಿಸಿದ್ದಾರೆ.

ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ ಬ್ರಹ್ಮಸಂದ್ರ ಗ್ರಾಮದಲ್ಲಿ ಶ್ರೀ ತಾರಕಾನಂದ ಮಠವಿದ್ದು, ಇದನ್ನು ವಂಶಪಾರಂಪರ್ಯವಾಗಿ ತಾವೇ ಸೇವಾ ಕಾರ್ಯಗಳನ್ನು ನಿರ್ವಹಿಸಿಕೊಂಡು ಬರುತ್ತೀರುವುದರಿಂದ ತಮ್ಮ ಹೆಸರಿಗೆ ಖಾತೆ ವರ್ಗಾವಣೆ ಮಾಡಿಕೊಡುವಂತೆ ಬಿ.ವಿ.ಸೂರ್ಯನಾರಾಯಣಾವ್, ಬಿ.ವಿ.ನಾಗೇಂದ್ರ ಮೂರ್ತಿ ಮತ್ತು ಬಿ.ವಿ.ನರಸಿಂಹಮೂರ್ತಿ ಎನ್ನುವವರು ಅರ್ಜಿ ಸಲ್ಲಿಸಿದ್ದು, ಆ ಆಧಾರದ ಮೇಲೆ ಗ್ರಾಮದಲ್ಲಿ ಪ್ರಕಟಣೆ ಹೊರಡಿಸಿ ಜಂಟಿ ಖಾತೆ ಮಾಡಲಾಗಿರುತ್ತದೆ. ಆದ್ದರಿಂದ ಸದರಿ ಪ್ರಕರಣವನ್ನು ಮುಕ್ತಾಯಗೊಳಿಸಬೇಕೆಂದು ಕೇಳಿಕೊಂಡಿದ್ದಾರೆ. ದೂರುದಾರರು ತಮ್ಮ ಪ್ರತ್ಯುತ್ತರದಲ್ಲಿ ದೂರಿನ ಅಂಶಗಳನ್ನು ಪುನರುಚ್ಚರಿಸಿದ್ದಾರೆ.

ದೂರುದಾರರು ಹಾಜರುಪಡಿಸಿದ ದೂರು ಮತ್ತು ದಾಖಲಾತಿಗಳು, ಆಕ್ಷೇಪಣೆ, ಪ್ರತ್ಯುತ್ತರ ಮತ್ತು ದಾಖಲಾತಿಗಳನ್ನು ಪರಿಶೀಲಿಸಿದಾಗ, 2012-13ನೇ ಸಾಲಿನ ತೆರಿಗೆ ಡಿಮ್ಯಾಂಡ್ ರಿಜಿಸ್ಟರ್‌ನ ಪ್ರತಿ ಲಭ್ಯವಿದ್ದು, ಇದರಲ್ಲಿ ಖಾತೆ ನಂ. 120, 122, 138 ಶ್ರೀ ತಾರಕಾನಂದ ಆಶ್ರಮದ ಹೆಸರಿನಲ್ಲಿರುತ್ತದೆ. ಆದರೆ 2014-15ನೇ ಸಾಲಿನ ತೆರಿಗೆ ಬೇಡಿಕೆ ರಿಜಿಸ್ಟರನಲ್ಲಿ ಖಾತೆ ನಂ.120 & 122, ಶ್ರೀ ತಾರಕಾನಂದ ಆಶ್ರಮದ ಹೆಸರಿನಲ್ಲಿದ್ದರೆ, 138 ಶ್ರೀ ಬಿ.ವಿ.ಸೂರ್ಯನಾರಾಯಣಾವ್, ಬಿ.ವಿ.ನಾಗೇಂದ್ರ ಮೂರ್ತಿ ಮತ್ತು ಬಿ.ವಿ.ನರಸಿಂಹಮೂರ್ತಿ ಎನ್ನುವವರ ಹೆಸರಿನಲ್ಲಿ ಜಂಟಿ ಖಾತೆಯಲ್ಲಿ ನಮೂದಾಗಿರುವುದು ಕಂಡುಬರುತ್ತದೆ.

2012-13ನೇ ಸಾಲಿನವರೆಗೆ ಎಲ್ಲಾ 3 ಖಾತೆ ನಂಬರುಗಳು ಆಶ್ರಮದ ಹೆಸರಿನಲ್ಲಿದ್ದರೆ 2014-15ನೇ ಸಾಲಿನಲ್ಲಿ ಖಾತೆ ನಂ.138 ಮೇಲ್ಕಾಣಿಸಿದ 3 ಜನರ ಹೆಸರಿನಲ್ಲಿ ಖಾತೆ ಬದಲಾವಣೆ ಮಾಡಿರುವುದು ಕಂಡುಬರುತ್ತದೆ. ಈ ರೀತಿ ಖಾತೆ ಬದಲಾವಣೆ ಮಾಡಲು ಯಾವುದೇ ದಾಖಲೆಗಳು ಇರುವುದಿಲ್ಲ. ಆಶ್ರಮದ ಹೆಸರಿನಲ್ಲಿರುವ ಆಸ್ತಿಯನ್ನು ವ್ಯಕ್ತಿಗಳ ಹೆಸರಿನಲ್ಲಿ ಬದಲಾವಣೆ ಮಾಡಿ, ಎದುರುದಾರರು ಕರ್ತವ್ಯಲೋಪವೆಸಗಿರುವುದು ಕಂಡುಬರುತ್ತದೆ

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಆನಂದಕುಮಾರ್, (ನಿವೃತ್ತ) ಕಾರ್ಯದರ್ಶಿ, ಚಿನ್ನೇನಹಳ್ಳಿ ಗ್ರಾಮ ಪಂಚಾಯತಿ, ಶಿರಾ ತಾಲ್ಲೂಕು, ತುಮಕೂರು ಜಿಲ್ಲೆ ಇವರು ದಿನಾಂಕ: 31-05-2015 ರಂದು ನಿವೃತ್ತಿ ಹೊಂದಿರುವುದರಿಂದ, ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮ 1966 ರ 3(1) (i) ಮತ್ತು (ii) ರನ್ವಯ "ದುರ್ನಡತೆ" ಎಸಗಿರುವುದು ಸಾಬೀತಾಗಿರುವುದರಿಂದ, ಕರ್ನಾಟಕ ನಾಗರೀಕ ಸೇವಾ ನಿಯಮಗಳು 214(2)(ಬಿ) ರ ಅಡಿಯಲ್ಲಿ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 14(ಎ) ಅಡಿಯಲ್ಲಿ ಈ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತ ರವರಿಗೆ ವಹಿಸಲು ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರರವರ ವರದಿಯನ್ನು ಪರಿಶೀಲಿಸಿ ಈ ಪ್ರಕರಣದಲ್ಲಿ ಒಳಗೊಂಡಿರುವ ನೌಕರರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ ನಿಯಮಗಳು 214 (2)(ಬಿ) ರನ್ವಯ ವಿಚಾರಣೆಯನ್ನು ನಡೆಸಲು 1957 ರ ನಿಯಮ 14-ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರು ಇವರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ/418/ಗ್ರಾಪಂಕಾ/2017, ಬೆಂಗಳೂರು, ದಿನಾಂಕ: 19-05-2017.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಆನಂದಕುಮಾರ್, (ನಿವೃತ್ತ) ಕಾರ್ಯದರ್ಶಿ, ಚಿನ್ನೇನಹಳ್ಳಿ ಗ್ರಾಮ ಪಂಚಾಯತಿ, ಶಿರಾ ತಾಲ್ಲೂಕು, ತುಮಕೂರು ಜಿಲ್ಲೆ ಇವರು ದಿನಾಂಕ: 31-05-2015 ರಂದು ನಿವೃತ್ತಿ ಹೊಂದಿರುವುದರಿಂದ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮ 1966 ರ 3(1) (i) ಮತ್ತು (ii) ರನ್ವಯ "ದುರ್ನಡತೆ" ಎಸಗಿರುವುದು ಸಾಬೀತಾಗಿರುವುದರಿಂದ, ಕರ್ನಾಟಕ ನಾಗರೀಕ ಸೇವಾ ನಿಯಮಗಳು 214(2)(ಬಿ) ರ ಅಡಿಯಲ್ಲಿ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 14(ಎ) ಅಡಿಯಲ್ಲಿ ಈ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರವರಿಗೆ ವಹಿಸಲಾಗಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ನಿಯಮ-8ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ಪಿ. ಅರುಣ್‌ಕುಮಾರ್)
ಉಪನಿರ್ದೇಶಕರು ಮತ್ತು ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**<u>ಗೆ:</u>**

1) ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ಮಾನ್ಯ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು. (ಪುಟ ಸಂಖ್ಯೆ 1 ರಿಂದ 32 ರವರೆಗಿನ ಮೂಲದಾಖಲೆಗಳನ್ನು ಈ ಪತ್ರದೊಂದಿಗೆ ಹಿಂದಿರುಗಿಸಲಾಗಿದೆ)
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ತುಮಕೂರು ಜಿಲ್ಲೆ.
5) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಶಿರಾ ತಾಲ್ಲೂಕು, ತುಮಕೂರು ಜಿಲ್ಲೆ.
6) ಶ್ರೀ ಆನಂದಕುಮಾರ್, (ನಿವೃತ್ತ) ಕಾರ್ಯದರ್ಶಿ, ಚಿನ್ನೇನಹಳ್ಳಿ ಗ್ರಾಮ ಪಂಚಾಯತಿ, ಶಿರಾ ತಾಲ್ಲೂಕು, ತುಮಕೂರು ಜಿಲ್ಲೆ.
7) ಗಣಕ ಕೋಶ-ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
8) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.